**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ**

**ಸಿಸಿ ಸಂಖ್ಯೆಃ 1042/2021**

**ಪಿರ್ಯಾದಿದಾರರುಃ** ರಾಜ್ಯ ಪರ ಪೊಲೀಸರು,
ಚನ್ನರಾಯಪಟ್ಟಣ ನಗರ ಪೋಲೀಸ್ ಠಾಣೆ

**ವಿರುದ್ದ**

**ಆರೋಪಿತ/ರುಃ** ಶಶಿಕಾಂತ ಬಿನ್ ಕೆಂಪರಾಜು,
31 ವರ್ಷ ವಯಸ್ಸು,
ವಾಸಃ ಮಂಚಿಗನಹಳ್ಳಿ ಫಾರಂ ಹೌಸ್,
ಶ್ರೀನಿವಾಸಪುರ ರೋಡ್, ಚನ್ನರಾಯಪಟ್ಟಣ ತಾಲ್ಲೂಕು,
ಹಾಸನ.

**ದೋಷಾರೋಪಣೆ**

**ದೀಪು ಬಿ.ಸಿ.,** ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಚನ್ನರಾಯಪಟ್ಟಣ ಆದ ನಾನು ಆರೋಪಿ/ಗಳಾದ ನಿಮ್ಮ ಮೇಲೆ ಹೊರಿಸುವ ದೋಷಾರೋಪಣೆ ಏನೆಂದರೆ,

ಚನ್ನರಾಯಪಟ್ಟಣ ನಗರ ಪೋಲೀಸ್ ಠಾಣಾ ಸರಹದ್ದಿಗೆ ಸೇರಿದ, ಚನ್ನರಾಯಪಟ್ಟಣ ಟೌನ್ ಮಂಚಿಗನಹಳ್ಳಿ ಗ್ರಾಮದ ತೋಟದ ಮನೆಯಲ್ಲಿ ವಾಸವಾಗಿರುವ ಆರೋಪಿಯಾದ ನೀವು ದಿನಾಂಕ 09.11.2016 ರಂದು ಸಾಕ್ಷಿ.1 ರವರನ್ನು ಹಾಸನದ ಆದಿಚುಂಚನಗಿರಿ ಕಲ್ಯಾಣ ಮಂಟಪದಲ್ಲಿ ಹಿಂದೂ ಸಂಪ್ರದಾಯದಂತೆ ಮದುವೆ ಮಾಡಿಕೊಂಡಿದ್ದು, ಮದುವೆ ಸಂದರ್ಭದಲ್ಲಿ 500 ಗ್ರಾಂ ತೂಕದ ಚಿನ್ನದ ಒಡವೆಗಳು ಹಾಗೂ ಬ್ರೀಜಾ ಕಾರನ್ನು ವರದಕ್ಷಿಣೆಯಾಗಿ ಪಡೆದುಕೊಂಡಿದ್ದು, ಇಬ್ಬರೂ ಒಂದು ವರ್ಷಗಳ ಕಾಲ ಅನ್ಯೂನ್ಯವಾಗಿ ಸಂಸಾರ ಮಾಡಿಕೊಂಡಿದ್ದು, ನಂತರ ಆರೋಪಿಯಾದ ನೀವು ಸಾಕ್ಷಿ.1 ರವರಿಗೆ ಹೆಚ್ಚಿನ ವರದಕ್ಷಿಣೆ ತರುವಂತೆ ಒತ್ತಾಯಿಸಿ, ಆ ಮೂಲಕ ಆರೋಪಿಯಾದ ನೀವು

**ವರದಕ್ಷಿಣೆ ನಿಷೇಧ ಕಾಯ್ದೆ ಕಲಂ 3 ಮತ್ತು 4** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

**2**) ಸಾಕ್ಷಿ.1 ರವರು ವರದಕ್ಷಿಣೆ ತರುವಂತೆ ಒತ್ತಾಯಿಸುತ್ತಿರುವುದನ್ನು ಸುಮ್ಮನೆ ಹೇಳುತ್ತಿರಬಹುದು ಎಂದು ಸುಮ್ಮನಿದ್ದು, ನಂತರದ ದಿನಗಳಲ್ಲಿ ಆರೋಪಿಯಾದ ನೀವು ಸಾಕ್ಷಿ.1 ರವರನ್ನು ಕುರಿತು ಅವರು ಕುಪಿತರಾಗಿ ಶಾಂತಿಭಂಗವನ್ನುಂಟುಮಾಡಲಿ ಎಂಬ ಉದ್ದೇಶದಿಂದ, ಸಾಕ್ಷಿ.1 ರವರಿಗೆ ಹಲ್ಕಾ ಮುಂಡೆ, ನೀನು ಇಲ್ಲದಿದ್ದರೆ ಬೇರೆ ಯಾರಾದರನ್ನು ಮದುವೆಯಾಗಿದ್ದರೆ ಇನ್ನೂ ಹೆಚ್ಚಿನ ವರದಕ್ಷಿಣೆ ನೀಡುತ್ತಿದ್ದರೆಂದು ಪದೇ ಪದೇ ಕೊಂಕು ಮಾತುಗಳನ್ನಾಡುತ್ತಾ, ಅವಾಚ್ಯ ಶಬ್ದಗಳಿಂದ ಬೈದು, ಆ ಮೂಲಕ ಆರೋಪಿಯಾದ ನೀವು **ಭಾರತೀಯ ದಂಡ ಸಂಹಿತೆ ಕಲಂಃ 504** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

**3**) ಈಗ್ಗೆ ಒಂದು ವರ್ಷದ ಹಿಂದೆ ಆರೋಪಿಯಾದ ನೀವು ಸಾಕ್ಷಿ.1 ರವರಿಗೆ ಕೊಲೆ ಬೆದರಿಕೆ ಹಾಕಿ, ಅಪರಾಧಿಕ ಭಯೋತ್ಪಾದನೆ ಉಂಟುಮಾಡಿ, ಆ ಮೂಲಕ ಆರೋಪಿಯಾದ ನೀವು **ಭಾರತೀಯ ದಂಡ ಸಂಹಿತೆ ಕಲಂಃ 506** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

**4**) ವಿಚಾರ ತಿಳಿದ ಸಾಕ್ಷಿ.2 ರವರು ಸಾಕ್ಷಿ.4 ರಿಂದ 7 ರವರನ್ನು ಆರೋಪಿಯಾದ ನಿಮ್ಮ ಮನೆಯಲ್ಲಿ ಸೇರಿಸಿಕೊಂಡು ನ್ಯಾಯ ಪಂಚಾಯ್ತಿ ಮಾಡಿ ತಿಳುವಳಿಕೆ ಹೇಳಿ 5 ಲಕ್ಷ ಹಣವನ್ನು ವರದಕ್ಷಿಣೆಯಾಗಿ ಕೊಟ್ಟು ಸರಿಯಾಗಿ ಸಂಸಾರ ಮಾಡಿಕೊಂಡು ಹೋಗುವಂತೆ ತಿಳುಳಿಕೆ ನೀಡಿ ಬಂದಿದ್ದರೂ ಸಹ ಆರೋಪಿಯಾದ ನೀವು ಇನ್ನೂ ಹೆಚ್ಚಿನ ವರದಕ್ಷಿಣೆ ಕೊಡಬೇಕೆಂದು ಸಾಕ್ಷಿ.1 ರವರಿಗೆ ಮಾನಸಿಕವಾಗಿ ಹಾಗೂ ದೈಹಿಕವಾಗಿ ಹಿಂಸೆ ಮತ್ತು ಕಿರುಕುಳ ನೀಡಿ, ಆ ಮೂಲಕ ಆರೋಪಿಯಾದ ನೀವು **ಭಾರತೀಯ ದಂಡ ಸಂಹಿತೆ ಕಲಂಃ 498**(ಎ) ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

**5**) ದಿನಾಂಕ 01.01.2021 ರಂದು ಬೆಳಗ್ಗೆ 9.00 ಗಂಟೆಯಲ್ಲಿ ಸೈಟ್ ಕೊಡಿಸುವ ವಿಚಾರದಲ್ಲಿ ಗಲಾಟೆ ಮಾಡಿ, 1ನೇ ಆರೋಪಿಯಾದ ನೀವು ನಿಮ್ಮ ಸ್ವಇಚ್ಛೆಯಿಂದ

ಕೈಯಿಂದ ಸಾಕ್ಷಿ.1 ರವರ ಕಪಾಳಕ್ಕೆ ಹೊಡೆದು, ಜುಟ್ಟು ಹಿಡಿದು ಎಳೆದಾಡಿ ತಲೆಯನ್ನು ಎರಡು ಮೂರು ಬಾರಿ ಗೋಡೆಗೆ ಗುದ್ದಿಸಿ ಸಾಮಾನ್ಯ ಸ್ವರೂಪದ ಗಾಯಪಡಿಸಿ, ಆ ಮೂಲಕ ಆರೋಪಿಯಾದ ನೀವು **ಭಾರತೀಯ ದಂಡ ಸಂಹಿತೆ ಕಲಂಃ 323** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

ದಿನಾಂಕಃ **21.10.2022**

(ದೀಪು ಬಿ.ಸಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ.

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ**

**ಸಿಸಿ ಸಂಖ್ಯೆ: 1042/2021**

**ಪಿರ್ಯಾದಿದಾರರು:** ರಾಜ್ಯ ಪರ ಪೊಲೀಸರು,
ಚನ್ನರಾಯಪಟ್ಟಣ ನಗರ ಪೋಲೀಸ್ ಠಾಣೆ

**ವಿರುದ್ದ**

**ಆರೋಪಿತ/ರು:** ಶಶಿಕಾಂತ ಬಿನ್ ಕೆಂಪರಾಜು,
31 ವರ್ಷ ವಯಸ್ಸು,
ವಾಸ: ಮಂಚಿಗನಹಳ್ಳಿ ಫಾರಂ ಹೌಸ್,
ಶ್ರೀನಿವಾಸಪುರ ರೋಡ್, ಚನ್ನರಾಯಪಟ್ಟಣ ತಾಲ್ಲೂಕು,
ಹಾಸನ.

**ದೋಷಾರೋಪಣೆ**

**ಪ್ರಶ್ನೆ:** 1. ಈಗ ನಿಮಗೆ ಓದಿ ಹೇಳಲಾದ ನಿಮ್ಮ ಮೇಲಿನ ದೋಷಾರೋಪಣೆ ನಿಮಗೆ ತಿಳಿಯಿತೆ?

ಉತ್ತರ: ಅರ್ಥವಾಯಿತು

**ಪ್ರಶ್ನೆ:** 2. ನೀವು ನಿಮ್ಮ ತಪ್ಪನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆ ನಡೆಯಲೆಂದು ಬಯಸುತ್ತೀರಾ?

ಉತ್ತರ: ವಿಚಾರಣೆಯಾಗಬೇಕು

(ಈ ದೋಷರೋಪಣೆಯನ್ನು ತೆರೆದ ನ್ಯಾಯಾಲಯದಲ್ಲಿ ಆರೋಪಿ/ಗಳಿಗೆ ತಿಳಿದಿರುವ ಭಾಷೆಯಲ್ಲಿ ಓದಿ ಹೇಳಿ ಕೇಳಲಾಗಿ ಆರೋಪಿ/ಗಳು ನೀಡಿರುವ ಉತ್ತರಗಳನ್ನು ಪಡೆದುಕೊಂಡಿದ್ದು ಅವು ಸರಿ ಇವೆ ಎಂದು ದೃಢೀಕರಿಸಲಾಯಿತು)

ದಿನಾಂಕ: **21.10.2022**

(ದೀಪು ಬಿ.ಸಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ.